ಇ) ಕುಷ್ಟರೋಗ ಪುನರ್ ವಸತಿಗಾಗಿ 1995-96 ನೇ ಸಾಲಿನಲ್ಲಿ ರೂ. 6,60,087-00 ನೀಡಲಾಗಿದೆ.

ವಿಷಯ :- 1996-97 ನೇ ಶೈಕ್ಷಣಿಕ ವರ್ಷದಲ್ಲಿ ಮಂಜೂರಾದ ಸರ್ಕಾರಿ ಪ್ರೌಢಶಾಲೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1025 (1836)

ಶ್ರೀ ಡಿ. ಆರ್. ಪಾಟೀಲ್ (ಗದಗ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97 ನೇ ಶೈಕ್ಷಣಿಕ ವರ್ಷದಲ್ಲಿ ಮಂಜೂರಾದ ಸರ್ಕಾರಿ ಪ್ರೌಢ ಶಾಲೆಗಳೆಷ್ಟು?

ಆ) ಇವುಗಳಲ್ಲಿ ಕನ್ನಡ ಮಾಧ್ಯಮ ಹಾಗೂ ಉರ್ದು ಮಾಧ್ಯಮದ ಪ್ರೌಢ ಶಾಲೆಗಳೆಷ್ಟು?

ಇ) ಕಡಿಮೆ ಉರ್ದು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಇರುವ ಕಾರಣಗಳೇನು?

ಈ) ಈ ಅನ್ಯಾಯ ಸರಿಪಡಿಸಲು ಇದೇ ಶೈಕ್ಷಣಿಕ ವರ್ಷದಲ್ಲಿ ಇನ್ನಷ್ಟು ಸರ್ಕಾರಿ ಉರ್ದು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಉ) ಆದರಲ್ಲಿ ಗದಗ ನಗರಕ್ಕೆ ಒಂದು ಸರಕಾರಿ ಉರ್ದು ಪ್ರೌಢಶಾಲೆಯನ್ನು ಇದೇ ಶೈಕ್ಷಣಿಕ ವರ್ಷದಲ್ಲಿ ಮಂಜೂರು ಮಾಡಲಾಗುವುದೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :-

ಅ) 200

ಆ) ಕನ್ನಡ - 182
ಉರ್ದು - 15

ಇ) ಅಗತ್ಯತೆ ಮತ್ತು ಸ್ಥಳೀಯ ಬೇಡಿಕೆಗಳಿಗೆ ಅನುಗುಣವಾಗಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ.

ಈ) ಯಾವುದೇ ಅನ್ಯಾಯವಾಗಿಲ್ಲದಿರುವುದರಿಂದ, ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಪರಿಶೀಲಿಸಲಾಗುವುದು.